ಆ) ನಾಲ್ಕು ವರ್ಷಗಳಲ್ಲಿ ಚನ್ನಪಟ್ಟಣ ತಾಲ್ಲೂಕಿನಲ್ಲಿ ಭಾಗ್ಯಜ್ಯೋತಿಯಡಿಯಲ್ಲಿ ವಿದ್ಯುತ್ ಸಂಪರ್ಕ ಪಡೆದಿರುವ ಮನೆಗಳ ಸಂಖ್ಯೆ 1783.

ವರ್ಷವಾರು ಮಾಹಿತಿಯು ಈ ಕೆಳಗಿನಂತಿದೆ:

1) 1989-90 - 200
2) 1990-91 - 316
3) 1991-92 - 268
4) 1992-93 - 999

ಇ) ಬಾಕಿ ಉಳಿದಿರುವ ಒಟ್ಟು ಅರ್ಜಿಗಳ ಸಂಖ್ಯೆ 345.

ಈ) ಪ್ರಸಕ್ತ ಸಾಲಾದ 1993-94ರಲ್ಲಿ ಚನ್ನಪಟ್ಟಣ ತಾಲ್ಲೂಕಿನಲ್ಲಿ 350 ನೀರಾವರಿ ಪಂಪುಸೆಟ್ಟುಗಳ ವಿದ್ಯುದ್ದೀಕರಣಕ್ಕೆ ಗುರಿ ನಿಗಧಿ ಪಡಿಸಲಾಗಿದೆ. ಜನವರಿ 94ರ ಅಂತ್ಯದ ವೇಳೆಗೆ 264 ನೀರಾವರಿ ಪಂಪುಸೆಟ್ಟುಗಳನ್ನು ವಿದ್ಯುದ್ದೀಕರಿಸಲಾಗಿದೆ. ಮಾರ್ಚ್ 94ರ ಅಂತ್ಯದ ವೇಳೆಗೆ ಗುರಿಯನ್ನು ಸಾಧಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

ಪ್ರಸಕ್ತ ಸಾಲಾದ 1993-94ರಲ್ಲಿ ಚನ್ನಪಟ್ಟಣ ಗ್ರಾಮಾಂತರ ವಿಧಾನ ಸಭಾ ಕ್ಷೇತ್ರದಲ್ಲಿ 1000 ಭಾಗ್ಯಜ್ಯೋತಿ ಇನ್ವಲೇಷನ್ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಗುರಿ ನಿಗಧಿಪಡಿಸಲಾಗಿದೆ. ಈ ಕಾರ್ಯವು ಪ್ರಗತಿಯಲ್ಲಿದೆ. ಈ ಎಲ್ಲಾ 1000 ಭಾಗ್ಯಜ್ಯೋತಿ ಇನ್ವಲೇಷನ್ಗಳಿಗೆ ಮಾರ್ಚ್ 94ರ ಅಂತ್ಯದ ವೇಳೆಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಚನ್ನಪಟ್ಟಣ ತಾಲ್ಲೂಕಿನಲ್ಲಿ ಕೆರೆಗಳ ಹೂಳೆತ್ತುವ ಬಗ್ಗೆ

246 - ಶ್ರೀ ಸಾದತ್ ಆಲಿಖಾನ್ (ಚನ್ನಪಟ್ಟಣ): ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚನ್ನಪಟ್ಟಣದಲ್ಲಿ ಕೆರೆಗಳ ಹೂಳೆತ್ತುವ ಒಟ್ಟು ಎಷ್ಟು ಪ್ರಸ್ತಾವನೆಗಳು ಸರ್ಕಾರದಲ್ಲಿ ಬಾಕಿ ಉಳಿದಿವೆ (ವಿವರಗಳನ್ನು ಒದಗಿಸುವುದು);

ಆ) ಹಾಲಿ ವರ್ಷದಲ್ಲಿ ಎಷ್ಟು ಕೆರೆಗಳ ಹೂಳೆತ್ತುವುದನ್ನು ತೆಗೆದುಕೊಳ್ಳಬೇಕಾಗಿದೆ. (ವಿವರಗಳನ್ನು ಒದಗಿಸುವುದು).

ಇ) ಇಗ್ಗಲೂರು ಯೋಜನೆಯಿಂದ ನೆರಳೂರು ಕೆರೆಗೆ ನೀರೆತ್ತುವ ಪ್ರಸ್ತಾವನೆಯು ಸರ್ಕಾರದಲ್ಲಿ ಕಳೆದ ಮೂರು ವರ್ಷಗಳಿಂದ ಬಾಕಿ ಉಳಿದಿರುವುದು ನಿಜವೇ?

ಈ) ಹಾಗಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಉ) ಇದನ್ನು ಯಾವಾಗ ತೆಗೆದುಕೊಳ್ಳಲಾಗುವುದು?

ಡಾ॥ ಆರ್.ಬಿ. ಚೌಧರಿ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ಯಾವುದೂ ಇಲ್ಲ.

ಆ) ಯಾವುದೂ ಇಲ್ಲ.

ಇ) ಇಗ್ಗಲೂರು ಬ್ಯಾರೇಜ್ ಯೋಜನೆಯ ಆಡಳಿತಾತ್ಮಕ ಹಾಗೂ ತಾಂತ್ರಿಕ ಮಂಜೂರಾತಿ ಆಗಿರುವ ಅಂದಾಜಿನಲ್ಲಿ ಇಗ್ಗಲೂರು ಯೋಜನೆಯಿಂದ ನೆರಳೂರು ಕೆರೆಗೆ ಪಂಪು ಮೂಲಕ ನೀರೊದಗಿಸುವ ಬಗ್ಗೆ ಅವಕಾಶ ಕಲ್ಪಿಸಿರುವುದಿಲ್ಲ. ಆದುದರಿಂದ ಈ ಪ್ರಸ್ತಾವನೆಯೂ ಸರ್ಕಾರದಲ್ಲಿ ಬಾಕಿ ಉಳಿದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.